ಸಹಕಾರ ಸಂಘಗಳಿಂದ ರೈತರಿಗೆ ನೀಡುತ್ತಿರುವ ಸಾಲ

571 (607) ಶ್ರೀ ಕೆ. ರಾಜು : ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ವ್ಯವಸಾಯ ಸೇವಾ ಸಹಕಾರ ಸಂಘಗಳಿಂದ ರೈತರಿಗೆ ಅಲ್ಪಾವಧಿ ಬೆಳೆ ಉತ್ತೇಜನಕ್ಕೆ ನೀಡುತ್ತಿದ್ದ ಸಾಲ ರೂ.50 ಸಾವಿರದಿಂದ ರೂ.1.00 ಲಕ್ಷಕ್ಕೆ ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಹಿಂದಿನ ಅಧಿವೇಶನದ ಸಮಯದಲ್ಲಿ ಸರ್ಕಾರ ರೂ.1.00 ಲಕ್ಷ ಸಾಲ ನೀಡುವ ನಿರ್ಧಾರವನ್ನು ಪ್ರಕಟಿಸಿದ್ದು ನಿಜವೇ;

ಇ) ಹಾಗಿದ್ದಲ್ಲಿ, ಇದನ್ನು ಯಾವಾಗ ಜಾರಿಗೆ ತರಲಾಗುವುದು?

ಶ್ರೀ ಜಗದೀಶ ಶೆಟ್ಟರ್ (ಮುಖ್ಯಮಂತ್ರಿಯವರು) :

ಅ) ವ್ಯವಸಾಯ ಸೇವಾ ಸಹಕಾರ ಸಂಘಗಳಿಂದ ರೈತರಿಗೆ ಅಲ್ಪಾವಧಿ ಬೆಳೆ ಸಾಲವನ್ನು ನಬಾರ್ಡನಿಂದ ದೊರೆಯುವ ಪುನರ್ಧನದ ಪ್ರಮಾಣ, ಡಿಸಿಸಿ ಬ್ಯಾಂಕುಗಳು ಹಾಗೂ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳಲ್ಲಿ ಲಭ್ಯವಿರುವ ಬಂಡವಾಳ ಮತ್ತು ರೈತರಿಂದ ಬರುವ ಸಾಲದ ಬೇಡಿಕೆಗೆ ಅನುಗುಣವಾಗಿ ಸಾಲದ ಮಿತಿಯನ್ನು ಆಯಾ ಸಂಸ್ಥೆಯವರು ನಿಗದಿಪಡಿಸುತ್ತಾರೆ.

ಆ) 2012–13ನೇ ಸಾಲಿನ ಆಯವ್ಯಯದಲ್ಲಿ ರೂ.1.00 ಲಕ್ಷದವರೆಗಿನ ಅಲ್ಪಾವಧಿ ಕೃಷಿ ಸಾಲಗಳನ್ನು ಶೂನ್ಯ ಬಡ್ಡಿದರದಲ್ಲಿ ನೀಡಲು ಪ್ರಕಟಿಸಲಾಗಿದ್ದು ಈ ಯೋಜನೆಯನ್ನು ಈಗಾಗಲೇ ಜಾರಿಗೊಳಿಸಲಾಗಿದೆ. ಆದರೆ ಸಾಲದ ಮೊತ್ತದ ಬಗ್ಗೆ ಸರ್ಕಾರದಿಂದ ಯಾವುದೇ ಮಿತಿಯನ್ನು ನಿಗದಿ ಮಾಡಿಲ್ಲ.

ಇ) ಉದ್ಭವಿಸುವುದಿಲ್ಲ.

ಮದ್ದೂರು ವಿಧಾನಸಭಾ ಕ್ಷೇತ್ರದ ಅಂಗನವಾಡಿಗಳು

537 (601) ಶ್ರೀಮತಿ ಕಲ್ಪನಾ ಸಿದ್ದರಾಜು (ಮದ್ದೂರು) : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ಮದ್ದೂರು ವಿಧಾನಸಭಾ ವ್ಯಾಪ್ತಿಯಲ್ಲಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು;